1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ನಂಜನಗೂಡು

**ಸಿ.ಸಿ.ಸಂಖ್ಯೆಃ 5905/2021**

ಫಿರ್ಯಾದಿ ಃ- ರಾಜ್ಯದ ಪರವಾಗಿ ಬಿಳಿಗೆರೆ ಪೋಲೀಸ್ ಠಾಣೆ,

ವಿರುದ್ಧ

ಆರೋಪಿ ಃ- ಮಹೇಶ, ಬಿನ್ ಲೋಲಯ್ಯ, 44 ವರ್ಷ,
ನಗರ್ಲೆ ಗ್ರಾಮ, ನಂಜನಗೂಡು ತಾಲ್ಲೂಕು

**ಆ ಪಾ ದ ನೆ**

*ಶ್ರೀ ಕಿಶೋರ್ ಕುಮಾರ್ ಎಂ., 1ನೇ ಹೆಚ್ಚುವರಿ* ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಬಿ.ಎ. ಎಲ್‌ಎಲ್.ಬಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ಆಪಾದಿಸುವುದೇನೆಂದರೆಃ-

ದಿನಾಂಕ 09.09.2021 ರಂದು 23.15 ಗಂಟೆ ಸಮಯದಲ್ಲಿ ಬಿಳಿಗೆರೆ ಪೊಲೀಸ್ ಠಾಣಾ ಸರಹದ್ದಿನ ನಗರ್ಲೆ ಗ್ರಾಮದ ಅಂಬೇಡ್ಕರ್ ಭವನದ ಮುಂಭಾಗ ರಸ್ತೆಯ ಸಾರ್ವಜನಿಕ ಸ್ಥಳದಲ್ಲಿ ಆರೋಪಿಯಾದ ನೀವು ಒಟ್ಟು 1229 ರೂ. 55 ಪೈಸೆ ಬೆಲೆ ಬಾಳುವ ಒಟ್ಟು 3150 ಮಿ.ಲೀ. ಮದ್ಯ ಇರುವ 90 ಎಂ.ಎಲ್.ನ 35 ಓರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿ ಟೆಟ್ರಾ ಪೌಚ್‌ಗಳನ್ನು ಯಾವುದೇ ಪರವಾನಿಗೆ ಇಲ್ಲದೆ ಅಕ್ರಮವಾಗಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುವ ಉದ್ದೇಶದಿಂದ ತೆಗೆದುಕೊಂಡು ಹೋಗಿರುತ್ತೀರಿ. ಆದ್ದರಿಂದ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯಿದೆ ಕಲಂ 32(2) ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯಲ್ಲಿ ಎಸಗಿರುವಿರೆಂದು ಈ ಮೂಲಕ ಆಪಾದಿಸುತ್ತೇನೆ.

ಪ್ರಶ್ನೆ.1- ಈಗ ಓದಿ ಹೇಳಿದ ಆಪಾದನೆ ನಿಮಗೆ ತಿಳಿಯಿತೆ?

ಉತ್ತರ ಃ

ಪ್ರಶ್ನೆ.2- ನೀವು ಮೇಲ್ಕಂಡ ಆಪಾದನೆಯನ್ನು ಒಪ್ಪಿಕೊಳ್ಳುವಿರೋ? ಅಥವಾ ವಿಚಾರಣೆಯಾಗಬೇಕೆಂದು ಬಯಸುವಿರೋ?

ಉತ್ತರಃ-

ಮೇಲ್ಕಂಡ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಈ ಮೇಲೆ ಹೇಳಿದಷ್ಟು ಪ್ರಮಾಣದ ಮಧ್ಯವನ್ನು ವಿಧಿ ವಿರುದ್ಧವಾಗಿ ತಮ್ಮ ಸ್ವಾಧೀನದಲ್ಲಿ ಇಟ್ಟುಕೊಂಡಿದ್ದು ಹಾಗೂ ಮೇಲ್ಕಂಡ ಮಧ್ಯದ ವಸ್ತುಗಳಲ್ಲಿ ಎಥೆನಾಲ್ ಅಂಶ ಇರುವ ಕಾರಣ, ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯಿದೆ ಕಲಂ 34 ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುವಿರೆಂದು ಈ ಮೂಲಕ ಆಪಾದಿಸುತ್ತೇನೆ.

ಪ್ರಶ್ನೆ.1- ಈಗ ಓದಿ ಹೇಳಿದ ಆಪಾದನೆ ನಿಮಗೆ ತಿಳಿಯಿತೆ?

ಉತ್ತರ ಃ

ಪ್ರಶ್ನೆ.2- ನೀವು ಮೇಲ್ಕಂಡ ಆಪಾದನೆಯನ್ನು ಒಪ್ಪಿಕೊಳ್ಳುವಿರೋ? ಅಥವಾ ವಿಚಾರಣೆಯಾಗಬೇಕೆಂದು ಬಯಸುವಿರೋ?

ಉತ್ತರಃ-

(ಮೇಲ್ಕಂಡ ಆಪಾದನೆಯನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿಗೆ ಓದಿ ಹೇಳಿ ಅವರ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನೊಳಗೊಂಡಿದೆ ಎಂದು ತೆರೆದ ನ್ಯಾಯಾಲಯದಲ್ಲಿ ದಿಃ11.10.2022 ರಂದು ದೃಢೀಕರಿಸಿದ್ದೇನೆ.)

1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ನಂಜನಗೂಡು